ಕನ್ನಡಪ್ರಭ

# ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ: ಹಿರಿಯ ನಾಗರಿಕರಿಗೆ ವಿಶೇಷ ಚಿಕಿತ್ಸಾಲಯ ಆರಂಭ

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯು ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯ ಆರಂಭಿಸಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿ ತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋ ವೈದ್ಯಕೀಯ ಸಮಸ್ಯೆಗೆಚಿಕಿತ್ಸೆನೀಡಲಿದ್ದಾರೆ. ಮನೋಗ್ರಹಿಕೆ ದೌರ್ಬಲ್ಯ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ವೃದ್ಧಾಪ್ಯದ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಪರಿಣಾಮಕಾರಿಯಾಗಿ ಚಿಕಿತ್ಸೆ ನೀಡಬಹುದು. ಸೂಕ್ತ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಔಷಧೋಪಚಾರದ ಮೂಲಕ ಜ್ಞಾಪಕ ಶಕ್ತಿ ಕುಂಠಿತ ವಾಗುವುದನ್ನು ನಿಧಾನಗೊಳಿಸಬಹುದು, ಖಿನ್ನತೆ ಹಾಗೂ ಆತಂಕವನ್ನು ಕಡಿಮೆ ಮಾಡಬಹುದು ಮತ್ತು ಹಿರಿಯ ನಾಗರಿಕರು ತಮ್ಮ ದೈನಂದಿನ ಜೀವನವನ್ನು ಉತ್ತಮ ವಾಗಿ ನಿರ್ವಹಿಸಲು ನೆರ ವಾಗಬಹುದು ಎಂದು ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ತಿಳಿಸಿದ್ದಾರೆ. ರೋಗಿಗಳು ಮತ್ತು ಅವರ ಕುಟುಂಬದವರು ಪ್ರತಿ ಶುಕ್ರವಾರ ಮಧ್ಯಾಹ್ನ 2.30 ರಿಂದ ಆಸ್ಪತ್ರೆಯ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯಕ್ಕೆ ಭೇಟಿ ನೀಡಬಹುದು. ಸಹಾಯವಾಣಿ 0820 2922761.

■ ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆ ಎದುರಾಗುತ್ತದೆ.


Powered by: erelego.com

16-7-2026
UDAYAVANI - MANIPAL

# ಮಣಿಪಾಲ ಕೆಎಂಸಿ: ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ ಆರಂಭ

**ಮಣಿಪಾಲ, ಜು. 15:** ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆಚಿಕಿತ್ಸೆನೀಡುವಉದ್ದೇಶದಿಂದ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯವನ್ನು ಆರಂಭಿಸಿದೆ.

ಈ ಚಿಕಿತ್ಸಾಲಯವು ಪ್ರತೀ ಶುಕ್ರವಾರ ಮಧ್ಯಾಹ್ನ 2.30ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿಚಿಕಿತ್ಸೆನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ ಹಾಗೂ ಬುದ್ಧಿಮಾಂದ್ಯ ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ಈ ಚಿಕಿತ್ಸಾಲಯದ ಮೂಲಕ ಹಿರಿಯ ನಾಗರಿಕರಿಗೆ ಎಲ್ಲ ಮಾನಸಿಕ ಸಮಸ್ಯೆಗಳಿಗೆ ಸೂಕ್ತ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಉತ್ತಮ ಆರೈಕೆಯನ್ನು ಒಂದೇ ಸ್ಥಳದಲ್ಲಿ ನೀಡುವ ಜತೆಗೆ ಅವರ ಕುಟುಂಬಗಳಿಗೂ ಬೆಂಬಲ ನೀಡುವ ಉದ್ದೇಶ ಆಸ್ಪತ್ರೆ ಹೊಂದಿದೆ. ರೋಗಿಗಳು ಮತ್ತು ಅವರ ಕುಟುಂಬದವರು ಶುಕ್ರವಾರ ಮಧ್ಯಾಹ್ನ 2.30ರಿಂದ ಆಸ್ಪತ್ರೆಯ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯಕ್ಕೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 0820 2922761 ಸಂಪರ್ಕಿಸುವಂತೆ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಹೊಸ ದಿಗಂತ
ಬುಧವಾರ 15, ಜುಲೈ 2026

# ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹಿರಿಯ ನಾಗರಿಕರಿಗೆ ವಿಶೇಷ ಚಿಕಿತ್ಸಾಲಯ ಆರಂಭ

**ಉಡುಪಿ:** ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯು ಹೊಸದಾಗಿ 'ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯ'ವನ್ನು ಆರಂಭಿಸಿದೆ. ಈ ವಿಶೇಷ ಚಿಕಿತ್ಸಾಲಯ ಪ್ರತಿ ಶುಕ್ರವಾರ ಮಧ್ಯಾಹ್ನ 2.30 ರಿಂದ ಆಸ್ಪತ್ರೆಯ ಮನೋ ವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಲಿದೆ. ವೃದ್ಧಾಪ್ಯದಲ್ಲಿ ಕಾಡುವ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಬುದ್ಧಿಮಾಂದ್ಯದಂತಹ ಸಮಸ್ಯೆಗಳಿಂದ ಬಳಲುತ್ತಿರುವ ಹಿರಿಯ ನಾಗರಿಕರಿಗೆ ಒಂದೇ ಸೂರಿನಡಿ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಔಷಧೋಪಚಾರದ ಮೂಲಕ ಉತ್ತಮ ಆರೈಕೆ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ತಿಳಿಸಿದ್ದಾರೆ. ಮಾಹಿತಿ ಹಾಗೂ ನೋಂದಣಿಗೆ ಸಾರ್ವಜನಿಕರು ಆಸ್ಪತ್ರೆಯ ಸಹಾಯವಾಣಿ ಸಂಖ್ಯೆ 0820- 2922761 ಅನ್ನು ಸಂಪರ್ಕಿಸಬಹುದು.

ವಿಜಯ ಕರ್ನಾಟಕ

ಶುಕ್ರವಾರ, 17 ಜುಲೈ 2026,

# ಹಿರಿಯ ನಾಗರಿಕರ ವಿಶೇಷ ಚಿಕಿತ್ಸಾಲಯ

**ವಿಕ ಸುದ್ದಿಲೋಕ** ಉಡುಪಿ

ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯ ಆರಂಭಿಸಿದೆ.

ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2.30ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ.

ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋಗ್ರಹಿಕೆ ದೌರ್ಬಲ್ಯ ಹಾಗೂ ಬುದ್ಧಿಮಾಂದ್ಯದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ಈ ಚಿಕಿತ್ಸಾಲಯವು ಹಲವು ಬಾರಿ ನಿರ್ಲಕ್ಷಿಸಲ್ಪಡುವ ಹಿರಿಯ ನಾಗರಿಕರ ಪ್ರಮುಖ ಅಗತ್ಯವನ್ನು ಪೂರೈಸಲಿದೆ ಎಂದು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ತಿಳಿಸಿದ್ದಾರೆ.

ಬುಧವಾರ • ಜುಲೈ 15, 2026
ಪ್ರಜಾವಾಣಿ

# ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ

ಉಡುಪಿ: ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ, ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯು ಹೊಸ ಸಮಗ್ರ ವೃದ್ಧಾಪ್ಯ ಮನೋ ವೈದ್ಯಕೀಯ ಚಿಕಿತ್ಸಾಲಯ ಆರಂಭಿಸಿದೆ.

ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2.30ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಕಾರ್ಯ ನಿರ್ವಹಿಸಲಿದೆ. ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ, ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ.  ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಅದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ, ಬುದ್ಧಿಮಾಂದ್ಯ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ನಿರ್ಲಕ್ಷಿಸಲ್ಪಡುವ ಹಿರಿಯ ನಾಗರಿಕರ ಪ್ರಮುಖ ಅಗತ್ಯವನ್ನು ಈ ಚಿಕಿತ್ಸಾಲಯವು ಪೂರೈಸಲಿದೆ ಎಂದು ಕಸ್ತೂರಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ತಿಳಿಸಿದ್ದಾರೆ. ಚಿಕಿತ್ಸಾಲಯದ ಮೂಲಕ ಹಿರಿಯ ನಾಗರಿಕರ ಎಲ್ಲಾ ಮಾನಸಿಕ ಸಮಸ್ಯೆಗಳಿಗೆ ಸೂಕ್ತ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಉತ್ತಮ ಆರೈಕೆಯನ್ನು ಒಂದೇ ಸ್ಥಳದಲ್ಲಿ ನೀಡುವುದರ ಜೊತೆಗೆ ಅವರ ಕುಟುಂಬಗಳಿಗೂ ಬೆಂಬಲ ನೀಡುವ ಉದ್ದೇಶವಿದೆ ಎಂದು ಹೇಳಿದರು.

ಸಹಾಯವಾಣಿ: 0820 2922761

**VIJAYAVANI**

**LINK:** https://www.vijayavani.net/category/news/comprehensive-geriatric-psychiatric-clinic-launched-at-kasturba-hospital-manipal-in-udupi

# ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗೆ ವಿಶೇಷ ಚಿಕಿತ್ಸಾಲಯ

Published by ಪ್ರಶಾಂತ ಜಿ. ಭಾಗ್ವತ

Published On Jul 14, 2026, 4:04pm IST | Last updated :Jul 14, 2026, 4:04pm IST

Add as a preferred source on Google

ಬಳಿಕ ಓದಿ



ಉಡುಪಿ ಮಣಿಪಾಲದಲ್ಲಿರುವ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗ.

* ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಆರಂಭ

* ಪ್ರತಿ ಶುಕ್ರವಾರ ಮಧ್ಯಾಹ್ನ 2:30ರಿಂದ ಸೇವೆ

**ಉಡುಪಿ:** ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಹೊಸದಾಗಿ 'ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯ' (Comprehensive Geriatric Psychiatry Clinic) ಆರಂಭಿಸಿದೆ.

ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2:30ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ (Psychiatry OPD) ಕಾರ್ಯನಿರ್ವಹಿಸಲಿದೆ. ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ.

ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ (mild cognitive impairment) ಹಾಗೂ ಬುದ್ಧಿಮಾಂದ್ಯ (dementia) ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರಿಗೆ ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವೂ ಸಹ ಒಂದೇ ಸ್ಥಳದಲ್ಲಿ ಲಭಿಸಲಿದೆ.

ಅಗತ್ಯವುಳ್ಳವರು ಚಿಕಿತ್ಸಾಲಯಕ್ಕೆ ಭೇಟಿ ನೀಡಬಹುದು. ಮಾಹಿತಿಗಾಗಿ ಸಹಾಯವಾಣಿ 0820-2922761 ಸಂಪರ್ಕಿಸಬಹುದು.

**NAMMA UDUPI BULLETIN**

**LINK:** https://nammaudupibulletin.com/suddigalu/pradeshika/reg-news-udupi-8208/





# ಕೆ.ಎಂ.ಸಿ ಮಣಿಪಾಲ: ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ ಆರಂಭ

By: Udupi Bulletin News Desk | Date: July 14, 2026

**ಮಣಿಪಾಲ, ಜು.14:** ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯವನ್ನು ಆರಂಭಿಸಿದೆ. ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2:30 ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ ಹಾಗೂ ಬುದ್ಧಿಮಾಂದ್ಯ ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ಭಾರತದಲ್ಲಿ ಹಿರಿಯ ನಾಗರಿಕರ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಇಂದು ದೇಶದಲ್ಲಿ 60 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಸುಮಾರು 13.8 ಕೋಟಿ ಜನರಿದ್ದಾರೆ. ಈ ಸಂಖ್ಯೆ 2031ರ ವೇಳೆಗೆ 19 ಕೋಟಿ ದಾಟಬಹುದು ಹಾಗೂ 2050ರ ವೇಳೆಗೆ ಸುಮಾರು 32 ಕೋಟಿ ತಲುಪಬಹುದು. ಜನರು ದೀರ್ಘಾಯುಷ್ಯ ಬದುಕುತ್ತಿದ್ದಂತೆ, ಭಾವನಾತ್ಮಕ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳೂ ಹೆಚ್ಚು ಸಾಮಾನ್ಯವಾಗುತ್ತಿವೆ. ಒಂದು ರಾಷ್ಟ್ರೀಯ ಅಧ್ಯಯನದ ಪ್ರಕಾರ, 60 ವರ್ಷ ಮೇಲ್ಪಟ್ಟ ಸುಮಾರು 88 ಲಕ್ಷ ಭಾರತೀಯರು, ಅಂದರೆ ಪ್ರತಿ ಹದಿಮೂರರಲ್ಲಿ ಸುಮಾರು ಒಬ್ಬರು ಬುದ್ಧಿಮಾಂದ್ಯದಿಂದ ಬಳಲುತ್ತಿದ್ದಾರೆ. ಪ್ರತಿ ಹತ್ತು ಹಿರಿಯ ನಾಗರಿಕರಲ್ಲಿ ಸುಮಾರು ಒಬ್ಬರು ಖಿನ್ನತೆಯಿಂದ ಬಳಲುತ್ತಿದ್ದಾರೆ ಎಂದೂ ಅಧ್ಯಯನಗಳು ತಿಳಿಸಿವೆ. ಜ್ಞಾಪಕ ಶಕ್ತಿ ಕುಂಠಿತ, ದುಃಖ ಅಥವಾ ವರ್ತನೆಯಲ್ಲಿನ ಬದಲಾವಣೆಗಳು ವೃದ್ಧಾಪ್ಯದ ಸಹಜ ಭಾಗ ಎಂದು ಕುಟುಂಬದವರು ಭಾವಿಸುವ ಕಾರಣ, ಈ ಸಮಸ್ಯೆಗಳು ಹೆಚ್ಚಿನ ಬಾರಿ ಗಮನಕ್ಕೆ ಬರುವುದೇ ಇಲ್ಲ.

ಇಂತಹ ಹಲವು ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಪರಿಣಾಮಕಾರಿಯಾಗಿ ಚಿಕಿತ್ಸೆ ನೀಡಬಹುದು ಎಂದು ವೈದ್ಯರು ಹೇಳುತ್ತಾರೆ. ಸೂಕ್ತ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಔಷಧೋಪಚಾರದ ಮೂಲಕ ಜ್ಞಾಪಕ ಶಕ್ತಿ ಕುಂಠಿತ ಪ್ರಕ್ರಿಯೆಯನ್ನು ನಿಧಾನಗೊಳಿಸಬಹುದು, ಖಿನ್ನತೆ ಹಾಗೂ ಆತಂಕವನ್ನು ಕಡಿಮೆ ಮಾಡಬಹುದು ಮತ್ತು ಹಿರಿಯ ನಾಗರಿಕರು ತಮ್ಮ ದೈನಂದಿನ ಜೀವನವನ್ನು ಉತ್ತಮವಾಗಿ ನಿರ್ವಹಿಸಲು ನೆರವಾಗಬಹುದು. ಇದು ಕುಟುಂಬದವರಿಗೆ ಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಹಾಗೂ ತಮ್ಮ ಹಿರಿಯರಿಗೆ ಉತ್ತಮ ಆರೈಕೆ ಒದಗಿಸಲು ಸಹಾಯ ಮಾಡುತ್ತದೆ.

**TULUNADUVARTHE**

**LINK:** https://tulunaduvarthe.com/kasturba-hospital-manipal-launches-a-special-clinic-for-the-mental-health-care-of-senior-citizens/

ಮಣಿಪಾಲ

# ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ ಆರಂಭಿಸಿದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ

By **TNVOffice** - July 14, 2026 0

ಮಣಿಪಾಲ: ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯವನ್ನು (Comprehensive Geriatric Psychiatry Clinic) ಆರಂಭಿಸಿದೆ. ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2:30 ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ (Psychiatry OPD) ಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ (mild cognitive impairment) ಹಾಗೂ ಬುದ್ಧಿಮಾಂದ್ಯ (dementia) ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ಭಾರತದಲ್ಲಿ ಹಿರಿಯ ನಾಗರಿಕರ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಇಂದು ದೇಶದಲ್ಲಿ 60 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಸುಮಾರು 13.8 ಕೋಟಿ ಜನರಿದ್ದಾರೆ. ಈ ಸಂಖ್ಯೆ 2031ರ ವೇಳೆಗೆ 19 ಕೋಟಿ ದಾಟಬಹುದು ಹಾಗೂ 2050ರ ವೇಳೆಗೆ ಸುಮಾರು 32 ಕೋಟಿ ತಲುಪಬಹುದು. ಜನರು ದೀರ್ಘಾಯುಷ್ಯ ಬದುಕುತ್ತಿದ್ದಂತೆ, ಭಾವನಾತ್ಮಕ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳೂ ಹೆಚ್ಚು ಸಾಮಾನ್ಯವಾಗುತ್ತಿವೆ. ಒಂದು ರಾಷ್ಟ್ರೀಯ ಅಧ್ಯಯನದ ಪ್ರಕಾರ, 60 ವರ್ಷ ಮೇಲ್ಪಟ್ಟ ಸುಮಾರು 88 ಲಕ್ಷ ಭಾರತೀಯರು, ಅಂದರೆ ಪ್ರತಿ ಹದಿಮೂರರಲ್ಲಿ ಸುಮಾರು ಒಬ್ಬರು ಬುದ್ಧಿಮಾಂದ್ಯದಿಂದ ಬಳಲುತ್ತಿದ್ದಾರೆ. ಪ್ರತಿ ಹತ್ತು ಹಿರಿಯ ನಾಗರಿಕರಲ್ಲಿ ಸುಮಾರು ಒಬ್ಬರು ಖಿನ್ನತೆಯಿಂದ ಬಳಲುತ್ತಿದ್ದಾರೆ ಎಂದೂ ಅಧ್ಯಯನಗಳು ತಿಳಿಸಿವೆ. ಜ್ಞಾಪಕ ಶಕ್ತಿ ಕುಂಠಿತ, ದುಃಖ ಅಥವಾ ವರ್ತನೆಯಲ್ಲಿನ ಬದಲಾವಣೆಗಳು ವೃದ್ಧಾಪ್ಯದ ಸಹಜ ಭಾಗ ಎಂದು ಕುಟುಂಬದವರು ಭಾವಿಸುವ ಕಾರಣ, ಈ ಸಮಸ್ಯೆಗಳು ಹೆಚ್ಚಿನ ಬಾರಿ ಗಮನಕ್ಕೆ ಬರುವುದೇ ಇಲ್ಲ.

ಇಂತಹ ಹಲವು ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಪರಿಣಾಮಕಾರಿಯಾಗಿ ಚಿಕಿತ್ಸೆ ನೀಡಬಹುದು ಎಂದು ವೈದ್ಯರು ಹೇಳುತ್ತಾರೆ. ಸೂಕ್ತ ತಪಾಸಣೆ, ಆಪ್ತ ಸಮಾಲೋಚನೆ ಹಾಗೂ ಔಷಧೋಪಚಾರದ ಮೂಲಕ ಜ್ಞಾಪಕ ಶಕ್ತಿ ಕುಂಠಿತ ಪ್ರಕ್ರಿಯೆಯನ್ನು ನಿಧಾನಗೊಳಿಸಬಹುದು, ಖಿನ್ನತೆ ಹಾಗೂ ಆತಂಕವನ್ನು ಕಡಿಮೆ ಮಾಡಬಹುದು ಮತ್ತು ಹಿರಿಯ ನಾಗರಿಕರು ತಮ್ಮ ದೈನಂದಿನ ಜೀವನವನ್ನು ಉತ್ತಮವಾಗಿ ನಿರ್ವಹಿಸಲು ನೆರವಾಗಬಹುದು. ಇದು ಕುಟುಂಬದವರಿಗೆ ಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಹಾಗೂ ತಮ್ಮ ಹಿರಿಯರಿಗೆ ಉತ್ತಮ ಆರೈಕೆ ಒದಗಿಸಲು ಸಹಾಯ ಮಾಡುತ್ತದೆ.

**DAIJIWORLD.COM**

**LINK:** https://share.google/tswWRDEhc7upuWpPz

# Kasturba Hospital, Manipal, launches special clinic to care for mental health of the older adults

Tue, Jul 14 2026 04:06:51 PM

Ads by Google
Send feedback
Why this ad?

*Media Release*

**Udupi, Jul 14:** Kasturba Hospital, Manipal, has launched a new comprehensive geriatric psychiatry clinic to address mental health and memory-related problems among older people. The clinic will run every Friday from 2:30 pm at the psychiatry outpatient department.

The clinic is meant for older adults who face problems such as depression, anxiety, memory loss, and other mental health issues as they grow older. Doctors at the clinic will examine and treat psychiatric problems in older adults. They will also treat conditions like mild cognitive impairment and dementia. Patients and their families can get consultation, diagnosis, and treatment in one place.



**KEMMANNU.COM**

**LINK:** https://share.google/WO8vAbJYy4aYG4rR9

*Kemmannu News Network, 14-07-2026 15:33:52*

Write Comment | E-Mail To a Friend | Facebook | Twitter | Print

Manipal, 14 July 2026: Kasturba Hospital, Manipal, has launched a new Comprehensive Geriatric Psychiatry Clinic to address mental health and memory-related problems among older people. The clinic will run every Friday from 2:30 PM at the Psychiatry Outpatient Department.



The clinic is meant for older adults who face problems such as depression, anxiety, memory loss, and other mental health issues as they grow older. Doctors at the clinic will examine and treat psychiatric problems in older adults. They will also treat conditions like mild cognitive impairment and dementia. Patients and their families can get consultation, diagnosis, and treatment in one place.

The number of older people in India is growing fast. Today, the country has around 13.8 crore people aged 60 and above. This number may cross 19 crores by 2031 and reach nearly 32 crores by 2050. As people live longer, emotional and memory problems are also becoming more common. A national study has found that about 88 lakh Indians above sixty, that is, nearly one in every thirteen, are living with dementia. Studies also show that close to one in ten older people has depression. Often, these problems go unnoticed because families believe that memory loss, sadness, or changes in behavior are a normal part of old age.

**DHRISHYA NEWS**

**LINK:** https://www.dhrishyanews.com/?p=36803

# ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ ಆರಂಭಿಸಿದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ

by Dhrishya News – 14/07/2026 in ಆರೋಗ್ಯ, ಸುದ್ದಿಗಳು 0



0 SHARES 9 VIEWS

ಮಣಿಪಾಲ, 14 ಜುಲೈ 2026: ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯವನ್ನು (Comprehensive Geriatric Psychiatry Clinic) ಆರಂಭಿಸಿದೆ. ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2:30 ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ (Psychiatry OPD) ಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ (mild cognitive impairment) ಹಾಗೂ ಬುದ್ಧಿಮಾಂದ್ಯ (dementia) ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

**KARAVALI XPRESS**

**LINK:** https://www.karavalixpress.in/2026/07/KMC.html



# ಹಿರಿಯ ನಾಗರಿಕರ ಮಾನಸಿಕ ಆರೋಗ್ಯ ಆರೈಕೆಗಾಗಿ ವಿಶೇಷ ಚಿಕಿತ್ಸಾಲಯ ಆರಂಭಿಸಿದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ

KaravaliXpress~Janardhan Kodavoor ಜುಲೈ 15, 2026




ಹಿರಿಯ ನಾಗರಿಕರಲ್ಲಿ ಕಂಡುಬರುವ ಮಾನಸಿಕ ಆರೋಗ್ಯ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ ಹೊಸ ಸಮಗ್ರ ವೃದ್ಧಾಪ್ಯ ಮನೋವೈದ್ಯಕೀಯ ಚಿಕಿತ್ಸಾಲಯವನ್ನು (Comprehensive Geriatric Psychiatry Clinic) ಆರಂಭಿಸಿದೆ. ಈ ಚಿಕಿತ್ಸಾಲಯವು ಪ್ರತಿ ಶುಕ್ರವಾರ ಮಧ್ಯಾಹ್ನ 2:30 ರಿಂದ ಮನೋವೈದ್ಯಕೀಯ ಹೊರರೋಗಿ ವಿಭಾಗದಲ್ಲಿ (Psychiatry OPD) ಕಾರ್ಯನಿರ್ವಹಿಸಲಿದೆ.

ವಯಸ್ಸಾದಂತೆ ಖಿನ್ನತೆ, ಆತಂಕ, ಜ್ಞಾಪಕ ಶಕ್ತಿ ಕುಂಠಿತ ಹಾಗೂ ಇತರ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರಿಗಾಗಿ ಈ ಚಿಕಿತ್ಸಾಲಯ ಮೀಸಲಾಗಿದೆ. ಇಲ್ಲಿನ ವೈದ್ಯರು ಹಿರಿಯ ನಾಗರಿಕರಲ್ಲಿ ಕಂಡುಬರುವ ಮನೋವೈದ್ಯಕೀಯ ಸಮಸ್ಯೆಗಳನ್ನು ಪರೀಕ್ಷಿಸಿ ಚಿಕಿತ್ಸೆ ನೀಡಲಿದ್ದಾರೆ. ಇದರೊಂದಿಗೆ ಸೌಮ್ಯ ಮನೋ ಗ್ರಹಿಕೆ ದೌರ್ಬಲ್ಯ (mild cognitive impairment) ಹಾಗೂ ಬುದ್ಧಿಮಾಂದ್ಯ (dementia) ದಂತಹ ಸ್ಥಿತಿಗಳಿಗೂ ಚಿಕಿತ್ಸೆ ನೀಡಲಾಗುವುದು. ರೋಗಿಗಳು ಮತ್ತು ಅವರ ಕುಟುಂಬದವರು ಸಲಹೆ, ರೋಗ ನಿರ್ಣಯ ಹಾಗೂ ಚಿಕಿತ್ಸೆ ಎಲ್ಲವನ್ನೂ ಒಂದೇ ಸ್ಥಳದಲ್ಲಿ ಪಡೆಯಬಹುದು.

ಭಾರತದಲ್ಲಿ ಹಿರಿಯ ನಾಗರಿಕರ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಇಂದು ದೇಶದಲ್ಲಿ 60 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಸುಮಾರು 13.8 ಕೋಟಿ ಜನರಿದ್ದಾರೆ. ಈ ಸಂಖ್ಯೆ 2031ರ ವೇಳೆಗೆ 19 ಕೋಟಿ ದಾಟಬಹುದು ಹಾಗೂ 2050ರ ವೇಳೆಗೆ ಸುಮಾರು 32 ಕೋಟಿ ತಲುಪಬಹುದು. ಜನರು ದೀರ್ಘಾಯುಷ್ಯ ಬದುಕುತ್ತಿದ್ದಂತೆ, ಭಾವನಾತ್ಮಕ ಹಾಗೂ ಜ್ಞಾಪಕ ಶಕ್ತಿ ಸಂಬಂಧಿತ ಸಮಸ್ಯೆಗಳೂ ಹೆಚ್ಚು ಸಾಮಾನ್ಯವಾಗುತ್ತಿವೆ. ಒಂದು ರಾಷ್ಟ್ರೀಯ ಅಧ್ಯಯನದ ಪ್ರಕಾರ, 60 ವರ್ಷ ಮೇಲ್ಪಟ್ಟ ಸುಮಾರು 88 ಲಕ್ಷ ಭಾರತೀಯರು, ಅಂದರೆ ಪ್ರತಿ ಹದಿಮೂರರಲ್ಲಿ ಸುಮಾರು ಒಬ್ಬರು ಬುದ್ಧಿಮಾಂದ್ಯದಿಂದ ಬಳಲುತ್ತಿದ್ದಾರೆ. ಪ್ರತಿ ಹತ್ತು ಹಿರಿಯ ನಾಗರಿಕರಲ್ಲಿ ಸುಮಾರು ಒಬ್ಬರು ಖಿನ್ನತೆಯಿಂದ ಬಳಲುತ್ತಿದ್ದಾರೆ ಎಂದೂ ಅಧ್ಯಯನಗಳು ತಿಳಿಸಿವೆ. ಜ್ಞಾಪಕ ಶಕ್ತಿ ಕುಂಠಿತ, ದುಃಖ ಅಥವಾ ವರ್ತನೆಯಲ್ಲಿನ ಬದಲಾವಣೆಗಳು ವೃದ್ಧಾಪ್ಯದ ಸಹಜ ಭಾಗ ಎಂದು ಕುಟುಂಬದವರು ಭಾವಿಸುವ ಕಾರಣ, ಈ ಸಮಸ್ಯೆಗಳು ಹೆಚ್ಚಿನ ಬಾರಿ ಗಮನಕ್ಕೆ ಬರುವುದೇ ಇಲ್ಲ.